ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**
**PAPER CLIPPINGS**

4

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 22/9/2020

# ಕೋವಿಡ್ ಉಪಕರಣ ಖರೀದಿಗೆ ವಾಗ್ವಾದ




**ಕೋವಿಡ್ ನಿಯಂತ್ರಣಕ್ಕೆ ಉಪಕರಣ ಖರೀದಿ ವಿಚಾರ, ಮೇಲ್ಮನೆಯಲ್ಲಿ ತೀವ್ರ ವಾಗ್ವಾದ**

**ವಿಧಾನ ಪರಿಷತ್ :** ಕೋವಿಡ್ ನಿಯಂತ್ರಣಕ್ಕಾಗಿ ಉಪಕರಣ ಖರೀದಿಯಲ್ಲಿ ಅವ್ಯವಹಾರ ನಡೆದಿದೆ ಎಂಬ ಆರೋಪಕ್ಕೆ ಸಂಬಂಧಿಸಿದಂತೆ ಮೇಲ್ಮನೆಯಲ್ಲಿ ಆಡಳಿತ ಹಾಗೂ ವಿರೋಧ ಪಕ್ಷದ ಸದಸ್ಯರ ನಡುವೆ ತೀವ್ರ ವಾಗ್ವಾದ ನಡೆಯಿತು.

ಸೋಮವಾರ ಬೆಳಗ್ಗೆ ಪ್ರಶ್ನೋತ್ತರ ಕಲಾಪ ಆರಂಭದಲ್ಲಿ ಕೋವಿಡ್ ನಿಯಂತ್ರಣ ಉಪಕರಣ ಖರೀದಿ ಸಂಬಂಧ ಕಾಂಗ್ರೆಸ್ ಸದಸ್ಯರಾದ ಎಂ. ನಾರಾಯಣಸ್ವಾಮಿ ಮತ್ತು ಪಿ.ಆರ್. ರಮೇಶ್ ಅವರ ಪ್ರಶ್ನೆಗೆ ಆರೋಗ್ಯ ಸಚಿವ ಶ್ರೀರಾಮುಲು, ಉತ್ತರ ನೀಡಲು 15 ದಿನಗಳ ಕಾಲಾವಕಾಶ ಬೇಕು. ತಾಲೂಕು ಮಟ್ಟದ ವರದಿ ಪಡೆಯಬೇಕಾಗಿದೆ ಎಂದರು.

ಈ ವೇಳೆ ಕಾಂಗ್ರೆಸ್ ಸದಸ್ಯರು ಸರ್ಕಾರದ ಬಳಿ ಈ ಮಾಹಿತಿ ಇಲ್ಲವೇ? 15 ದಿನದ ಕಾಲಾವಕಾಶ ಏಕೆ ಎಂದು ಪ್ರಶ್ನಿಸಿದರು. ಆಗ ಸಭಾಪತಿ ಪ್ರತಾಪಚಂದ್ರ ಶೆಟ್ಟಿ ಪ್ರತಿಕ್ರಿಯಿಸಿ, ಉತ್ತರ ನೀಡಲು 15 ದಿನದ ಅವಕಾಶ ಏಕೆ? ಬೇಗ ನೀಡಿ ಎಂದರು. ಸಭಾ ನಾಯಕ ಕೋಟ ಶ್ರೀನಿವಾಸ ಪೂಜಾರಿ ಪ್ರತಿಕ್ರಿಯಿಸಿ ಅಧಿವೇಶನ ಮುಗಿಯುವುದರೊಳಗೆ ನೀಡುತ್ತೇವೆ ಎಂದರು. ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಕಾಂಗ್ರೆಸ್ ಸದಸ್ಯರು, ಕೊರೊನಾ ಸಾಮಗ್ರಿಗಳ ಖರೀದಿಯಲ್ಲಿ ಅವ್ಯವಹಾರವಾಗಿದೆ ಎಂದು ಆರೋಪಿಸಿದರು.

ಪ್ರತಿ ವಸ್ತುಗಳ ಖರೀದಿಗೂ ಮುನ್ನ ಗುಣಮಟ್ಟ ಪರಿಶೀಲನಾ ಸಮಿತಿ, ತಾಂತ್ರಿಕ ನಿರ್ದಿಷ್ಟತಾ ಸಮಿತಿ, ಖರೀದಿ ಸಮಿತಿ ಹಾಗೂ ತಜ್ಞರ ಸಮಿತಿ ಜತೆಗೆ ಚರ್ಚಿಸಲಾಗಿದೆ. ಯಾವುದೇ ರೀತಿಯ ಲೋಪದೋಷವಾಗಿಲ್ಲ, ಮಾಹಿತಿ ತಾಲೂಕು ಮಟ್ಟದಿಂದ ಪಡೆಯಬೇಕಿರುವುದರಿಂದ ಸ್ವಲ್ಪ ವಿಳಂಬವಾಗಲಿದೆ ಎಂದು ಸಚಿವ ಶ್ರೀರಾಮುಲು ತಿಳಿಸಿದರು.

ಸಚಿವರ ಉತ್ತರಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಕಾಂಗ್ರೆಸ್‌ನ ಎಂ.ನಾರಾಯಣಸ್ವಾಮಿ, ಕೇಂದ್ರ ಸರ್ಕಾರ 4 ಲಕ್ಷ ರೂ.ಗೆ 1 ವೆಂಟಿಲೇಟರ್ ತರಿಸಿದೆ. ಆದರೆ, ರಾಜ್ಯದಲ್ಲಿ ಅದಕ್ಕಿಂತ ಹೆಚ್ಚಿನ ಮೊತ್ತ ನೀಡಿ ವೆಂಟಿಲೇಟರ್ ಖರೀದಿಸಲಾಗಿದೆ. ಇದನ್ನು ಗಮನಿಸಿದರೆ, ಕೇಂದ್ರ ನೀಡಿರುವ ವೆಂಟಿಲೇಟರ್ ಕಳಪೆ ಗುಣಮಟ್ಟದ್ದು ಎಂಬ ಅನುಮಾನ ಮೂಡುತ್ತದೆ. ಅಲ್ಲದೆ, ಬಿಜೆಪಿಯ ಮಾಜಿ ಶಾಸಕ ಡಾ. ಸಾರ್ವಭೌಮ ಬಗಲಿ ನಕಲಿ ವೆಂಟಿಲೇಟರ್ ವಿರುದ್ಧ ದೂರು ನೀಡಿದ್ದಾರೆ. ಇದನ್ನೆಲ್ಲ ಸರ್ಕಾರ ಯಾಕೆ ಗಮನಿಸುತ್ತಿಲ್ಲ ಎಂದು ಪ್ರಶ್ನಿಸಿದರು.

ಈ ವೇಳೆ ಬಿಜೆಪಿ ಸದಸ್ಯರು ಎದ್ದು, ಇದು ಪ್ರಶ್ನೋತ್ತರ ಕಲಾಪ. ಶೂನ್ಯ ವೇಳೆಯಲ್ಲಿ ಈ ಬಗ್ಗೆ ಚರ್ಚೆ ಮಾಡುವ ಅವಶ್ಯಕತೆಯಿಲ್ಲ ಎಂದರು. ಸಭಾಪತಿ ಪ್ರತಾಪಚಂದ್ರ ಶೆಟ್ಟಿ ಮಧ್ಯಪ್ರವೇಶಿಸಿ, ಕೊರೊನಾ ತಡೆ ಉಪಕರಣಗಳ ಖರೀದಿ ವಿಚಾರವಾಗಿ ಅರ್ಧ ಗಂಟೆ ಪ್ರತ್ಯೇಕ ಚರ್ಚೆಗೆ ಅವಕಾಶ ನೀಡಲಾಗುವುದು ಎಂದು ಗದ್ದಲಕ್ಕೆ ತೆರೆ ಎಳೆದರು.